185

16

17/03/

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಯತೀಂದ್ರ ಎಸ್ ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮಠಾಣಾ ವ್ಯಾಪ್ತಿಯಲ್ಲಿ ಸ್ಥಳಾವಕಾಶದ ಕೊರತೆಯಿಂದಾಗಿ ವಸತಿ ಯೋಜನೆಯ ಫಲಾನುಭವಿಗಳು ತಮ್ಮ ಕೃಷಿ ಭೂಮಿಯಲ್ಲಿ ಮನೆ ನಿರ್ಮಿಸಿಕೊಳ್ಳುತ್ತಿದ್ದು, ಕಟ್ಟಡ ಕಟ್ಟುವ ಮುಂಚೆ ಖಾಲಿ ನಿವೇಶನಕ್ಕೆ ಗ್ರಾಮ ಪಂಚಾಯಿತಿಯಿಂದ ಇ-ಸ್ವತ್ತು ದಾಖಲಾತಿ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಆದರೆ ಪ್ರಸ್ತುತ ನಿಯಮದಂತೆ ಕೃಷಿ ಭೂಮಿಯಲ್ಲಿ ನಿರ್ಮಿಸುವ ಮನೆಗಳಿಗೆ ಇ-ಸ್ವತ್ತು 11 ಎ ನಮೂನೆ ಸೃಜಿಸಲು ಅನ್ಯಕ್ರಾಂತವಾಗಿರಬೇಕು. ಇಲ್ಲದಿದ್ದಲ್ಲಿ ಕೃಷಿ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಲು ಸಾಧ್ಯವಾಗುತ್ತಿಲ್ಲ. ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕೃಷಿ ಭೂಮಿಯ ಎರಡು ಗುಂಟೆ ನಿವೇಶನದಲ್ಲಿ ಮನೆ ನಿರ್ಮಿಸಲು ಅನ್ಯಕ್ರಾಂತದಿಂದ ವಿನಾಯಿತಿ ನೀಡಿ ಇ-ಸ್ವತ್ತು ತಂತ್ರಾಂಶದಲ್ಲಿ ವಸತಿ ಯೋಜನೆ ಫಲಾನುಭವಿಗಳಿಗೆ ಪ್ರತ್ಯೇಕ ವರ್ಗೀಕರಣ ಮಾಡಿ ಕೃಷಿ ಭೂಮಿಯಲ್ಲಿ ಕಟ್ಟಡ ನಿರ್ಮಿಸಿದ ಫಲಾನುಭವಿಗಳಿಗೂ ಸಹ ಇ-ಸ್ವತ್ತು ಸೃಜಿಸಲು ಅವಕಾಶ ಕಲ್ಪಿಸಿಕೊಡುವ ಬಗ್ಗೆ.

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಂದು ಅಧಿಸೂಚಿಸಲಾಗಿದ್ದು, ಪ್ರಕರಣ 199 ಕ್ಕೆ ಹೊಸದಾಗಿ ಪ್ರಕರಣ 199ಬಿ ಮತ್ತು 199ಸಿ ಗಳನ್ನು ಅಧಿಸೂಚಿಸಲಾಗಿರುತ್ತದೆ.

ಈ ಅಧಿನಿಯಮದ ಪ್ರಕರಣ 199ಬಿ ರನ್ವಯ ಅಧಿಸೂಚನೆ ದಿನಾಂಕ: 07.04.2025 ರ ನಂತರ ಗ್ರಾಮ ಪಂಚಾಯಿತಿಗಳು ಹೊಸ ಖಾತಾ ಅಥವಾ ಪಿ.ಐ.ಡಿ.ಯನ್ನು ನೀಡಬೇಕಾದರೆ ಗ್ರಾಮ ಪಂಚಾಯಿತಿ ಅಧಿಕಾರ ವ್ಯಾಪ್ತಿಯ ಯೋಜನಾ ಪ್ರಾಧಿಕಾರದ ಮೂಲಕ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961 ರ ಉಪಬಂಧಗಳನ್ವಯ ಲೇಔಟ್ ಪ್ಲಾನಿಗಾಗಿ ಪೂರ್ವಾನುಮೋದನೆಯನ್ನು ಪಡೆದುಕೊಳ್ಳತಕ್ಕದು ಎಂದು ಅಧಿಸೂಚಿಸಲಾಗಿರುತ್ತದೆ.

ದಿನಾಂಕ: 07.04.2025ರ ಪೂರ್ವದಲ್ಲಿ ಕೃಷಿ ಭೂಮಿಯಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರನ್ವಯ ನಮೂನೆ 11ಬಿ ಅನ್ನು ಸಾರ್ವಜನಿಕರು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.

ದಿನಾಂಕ: 07.04.2025ರ ನಂತರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025ರ ಪ್ರಕರಣ 199ಬಿ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025ರನ್ವಯ ಕಡ್ಡಾಯವಾಗಿ ಭೂ ಪರಿವರ್ತನೆ ಹಾಗೂ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961 ರ ಉಪಬಂಧಗಳನ್ವಯ ಅನುಮೋದನೆ ಪಡೆದಿರುವ ಆಸ್ತಿಗಳಿಗೆ ನಮೂನೆ ಸೃಜಿಸಲಾಗುವುದು.

**ಸಂಖ್ಯೆ:** RDPR 360 GPA 2026.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.